# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :-** ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮಕ್ಕೆ ವ್ಯವಸ್ಥಾಪಕ ನಿರ್ದೇಶಕರ ಹುದ್ದೆ ಸೃಜಿಸುವ ಬಗ್ಗೆ.

**ಓದಲಾಗಿದೆ :-**

1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ /32/ಕೃಯೋಕ/2010. ದಿನಾಂಕ: 08-09-2011.

*********

**ಪ್ರಸ್ತಾವನೆ :-**

ಕೃಷಿ ಕ್ಷೇತ್ರದಲ್ಲಿ ವಿವಿಧ ಬೆಳೆಗಳಿಗೆ ನೀರನ್ನು ಮಿತವ್ಯಯವಾಗಿ ಬಳಸುವುದನ್ನು ಪ್ರೋತ್ಸಾಹಿಸಲು, ನೀರನ್ನು ಸಂರಕ್ಷಿಸಲು, ಅಂತರ್‌ಜಲ ಮಟ್ಟವನ್ನು ಹೆಚ್ಚಿಸಲು, ಆಹಾರ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುವ ಮೂಲ ಉದ್ದೇಶದಿಂದ ರಾಜ್ಯದಲ್ಲಿ ಸೂಕ್ಷ್ಮ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮವನ್ನು ರಚಿಸಲಾಗಿದೆ. ಹೀಗೆ ಸ್ಥಾಪಿಸಲಾದ ನಿಗಮದಲ್ಲಿ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯನ್ನು ಕೃಷಿ ಇಲಾಖೆಯ ಕೃಷಿ ನಿರ್ದೇಶಕರ ತತ್ಸಮಾನ ಹುದ್ದೆಯಲ್ಲಿರುವ ಕೃಷಿ ನಿರ್ದೇಶಕರಿಂದ ಭರ್ತಿ ಮಾಡಬೇಕಾಗಿದೆ. ಆದರೆ ವಾಸ್ತವವಾಗಿ ಸದರಿ ಹುದ್ದೆಯು ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಒಳಪಟ್ಟಿರುವ ವೃಂದ ಬಲದಲ್ಲಿ ಸೇರ್ಪಡೆಗೊಂಡಿರುವುದಿಲ್ಲ. ಆದ್ದರಿಂದ ಸದರಿ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯನ್ನು ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ವೃಂದಬಲದಲ್ಲಿ ಸೇರ್ಪಡೆಗೊಳಿಸಬೇಕಾಗಿದೆ. ಹಾಗೂ ಸದರಿ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯನ್ನು ಭರ್ತಿ ಮಾಡುವ ಮುನ್ನ ಕೃಷಿ ಇಲಾಖೆಯಲ್ಲಿ ಖಾಲಿಯಿರುವ ಕೃಷಿ ನಿರ್ದೇಶಕರ ವೃಂದದಲ್ಲಿ ಒಂದು ಹೆಚ್ಚುವರಿ ಹುದ್ದೆಯನ್ನು ಸೃಜಿಸಿ ಭರ್ತಿಮಾಡುವ ಅವಶ್ಯಕತೆ ಇರುತ್ತದೆ. ಆದ್ದರಿಂದ ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕೃಷಿ ನಿರ್ದೇಶಕರ ಹುದ್ದೆಯ ವೃಂದಬಲವನ್ನು ಈಗಿರುವ ಎರಡಕ್ಕೆ ಬದಲಾಗಿ ಮೂರಕ್ಕೆ ಹೆಚ್ಚಿಸುವ ಮತ್ತು ಒಂದು ಹೊಸ ಹುದ್ದೆಯನ್ನು ಸೃಜಿಸುವ ಬಗ್ಗೆ ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 204 ಕೃಪಸೇ 2011**
**ಬೆಂಗಳೂರು, ದಿನಾಂಕ: 07-01-2012**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನಲೆಯಲ್ಲಿ ಕರ್ನಾಟಕ ಅಂತರ್‌ಗಂಗಾ ಸೂಕ್ಷ್ಮ ನೀರಾವರಿ ನಿಗಮದ ಆಡಳಿತ ಮಂಡಳಿಗೆ ಕೃಷಿ ಇಲಾಖೆಯ ಕೃಷಿ ನಿರ್ದೇಶಕರ ತತ್ಸಮಾನ ಹುದ್ದೆಯಲ್ಲಿರುವ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಯನ್ನು ತುಂಬಲು

ಈಗಿರುವ ಕೃಷಿ ನಿರ್ದೇಶಕರ ವೃಂದದ ಜೊತೆ ಮತ್ತೊಂದು ಕೃಷಿ ನಿರ್ದೇಶಕರ ಹುದ್ದೆಯನ್ನು ಹೊಸದಾಗಿ ಸೃಜಿಸಲಾಗಿದೆ.

ಮೇಲ್ಕಂಡ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಕೃತೋಇ 32 ಕೃಯೋಕ 2010. ದಿನಾಂಕ: 08-09-2011. ರ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ :-

1. ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
3. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
4. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
6. ಸರ್ಕಾರದ ಜಂಟಿ ಕಾರ್ಯದರ್ಶಿ, ಕೃಷಿ ಇಲಾಖೆ ಅವರ ಆಪ್ತ ಸಹಾಯಕರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.